ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ಗೃಹ - ಸಿ.ಡಿ. ಪ್ರಕರಣ

ತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 4/4/2021

# ಮಾಜಿ ಸಚಿವರ ಪಾತ್ರ ತನಿಖೆಗೆ ಹೊಸ ಸೂತ್ರ

ಸಂ.ಕ. ಸಮಾಚಾರ ಬೆಂಗಳೂರು 4/4/21

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸಿಡಿ ಪ್ರಕರಣ ತಿರುವು ಪಡೆಯುತ್ತಿದ್ದು ಇದೀಗ ಮಾಜಿ ಸಚಿವ ಡಿ. ಸುಧಾಕರ್ ಅವರದ್ದೂ ಈ ಪ್ರಕರಣದಲ್ಲಿನಂಟಿರುವ ಬಗ್ಗೆ ಸುಳಿವು ಸಿಕ್ಕಿದೆ.

ಸಿಡಿ ಪ್ರಕರಣದಲ್ಲಿ ಡಿ. ಸುಧಾಕರ್ ಅವರು ಲಾಕ್‌ಡೌನ್ ಸಂದರ್ಭದಲ್ಲಿ ಯುವತಿಯ ಜತೆ 36 ಬಾರಿ ಮೊಬೈಲ್ ಸಂಭಾಷಣೆ ನಡೆಸಿದ್ದರು ಎಂಬುದು ಈಗ ಬಹಿರಂಗವಾಗಿದೆ. ಇದರ ಹಿನ್ನೆಲೆಯಲ್ಲಿ ಸುಧಾಕರ್ ಅವರಿಗೆ ಎಸ್‌ಐಟಿ ಅಧಿಕಾರಿಗಳು ನೋಟಿಸ್ ನೀಡುವ ಸಾಧ್ಯತೆ ಇದೆ.

ಈ ಪ್ರಕರಣದಲ್ಲಿ ಇನ್ನೊರ್ವ ಮಾಜಿ ಸಚಿವ ಸೇರಿದಂತೆ ಮೂವರ ಜತೆ ಯುವತಿ ಹಲವು ಬಾರಿ ಮಾತನಾಡಿರುವುದು ಯುವತಿ ಮೊಬೈಲ್‌ನ ಕಾಲ್ ಡಿಟೇಲ್ಸ್‌ನಿಂದ ಪತ್ತೆಯಾಗಿದೆ. ನಾನು ಜನಪ್ರತಿನಿಧಿ ಎಷ್ಟು ಜನರು ಕರೆ ಮಾಡಿರುತ್ತಾರೋ ನನಗೆ ಗೊತ್ತಿಲ್ಲ. ಈ ಪ್ರಕರಣಕ್ಕೂ ನನಗೂ ಯಾವುದೇ ಸಂಬಂಧವಿಲ್ಲ ಎಂದು ಮಾಜಿ ಸಚಿವ ಡಿ. ಸುಧಾಕರ್ ಮಾಧ್ಯಮಗಳ ಮುಂದೆ ಹೇಳಿದ್ದಾರೆ. ಯುವತಿ ಪ್ರತ್ಯಕ್ಷವಾದ ದಿನವೇ ಅವರ ಮೊಬೈಲನ್ನು ಎಸ್‌ಐಟಿ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದರು. ಎಲ್ಲ ಕರೆಗಳನ್ನು ಪರಿಶೀಲಿಸಿದಾಗ ಈ ಮಾಹಿತಿ ಹೊರಬಿದ್ದಿದೆ.

ಕಳೆದ ನಾಲ್ಕುದಿನಗಳಿಂದ ಎಸ್‌ಐಟಿ ಅಧಿಕಾರಿಗಳು ಯುವತಿಯನ್ನು ಎಡಬಿಡದೇ ವಿಚಾರಣೆ ನಡೆಸುತ್ತಿದ್ದಾರೆ. ಶನಿವಾರ ಆಡುಗೋಡಿಯ ಟೆಕ್ನಿಕಲ್ ಸೆಂಟರ್‌ನಲ್ಲಿ ಸುಮಾರು 5 ಗಂಟೆಗಳ ಕಾಲ ವಿಚಾರಣೆಗೊಳಪಡಿಸಿ ಮಾಹಿತಿ ಪಡೆದಿದ್ದಾರೆ.

ಎಸಿಪಿ ಕವಿತಾ ಹಾಗೂ ಅಧಿಕಾರಿಗಳು ನಡೆಸಿದ ವಿಚಾರಣೆ ಸಂದರ್ಭದಲ್ಲಿ ಯುವತಿಗೆ ಪ್ರಶ್ನೆಗಳ ಸುರಿಮಳೆಗೈದಿದ್ದಾರೆ. ಈ ಹಿಂದೆ ಬೆಳಗಾವಿ ಎಪಿಎಂಸಿ ಠಾಣೆಯಲ್ಲಿ ಮಗಳನ್ನು ಅಪಹರಿಸಲಾಗಿದೆ ಎಂದು ಯುವತಿಯ ಪೋಷಕರು ನೀಡಿದ ದೂರಿಗೆ ಸಂಬಂಧಿಸಿದಂತೆ ಅಧಿಕಾರಿಗಳು ನಿಮ್ಮನ್ನು ಯಾರಾದರೂ ಅಪಹರಿಸಿದ್ದರೆ? ಎಂಬ ಪ್ರಶ್ನೆಗೆ ಯುವತಿ ನಾನು ನನ್ನ ಸ್ವ ಇಚ್ಛೆಯಿಂದ ಹೋಗಿದ್ದೆ. ರಮೇಶ್ ಜಾರಕಿಹೊಳಿ ನನಗೆ ಮಾನಸಿಕವಾಗಿ ಹಿಂಸೆ ನೀಡುತ್ತಿದ್ದರು ಹಾಗಾಗಿ ನಾನೇ ಸಿಡಿ ಮಾಡಿದೆ ಎಂದು ಹೇಳಿದಳು ಎಂದು ತಿಳಿದುಬಂದಿದೆ.


ಸಿಡಿ ಲಲನೆ ದೂರು

ರಮೇಶ್ ಜಾರಕಿಹೊಳಿ ಅವರಿಗೂ ವಿಚಾರಣೆಗೆ ಹಾಜರಾಗುವಂತೆ ನೋಟೀಸ್ ನೀಡಲಾಗಿತ್ತು. ಅವರ ಪರ ವಕೀಲರು ರಮೇಶ್ ಜಾರಕಿಹೊಳಿ ಅವರಿಗೆ ಅನಾರೋಗ್ಯ ಎಂದು ತಿಳಿಸಿದ್ದು ಸೋಮವಾರ ವಿಚಾರಣೆಗೆ ಹಾಜರಾಗಲು ಅಧಿಕಾರಿಗಳು ಹೇಳಿದ್ದಾರೆ.